ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಶಿವಾನಂದ ಹೂಗಾರ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಬಾದಾಮಿ, ಮತ್ತಿತರರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:** 1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿಸಂಖ್ಯೆ:ಕಂಪ್ಲೇಂಟ್/ ಉಪಲೋಕ್/ಬಿಜಿಎಂ/2153/2015/ ಸನಿಕಾಸ-2, ದಿನಾಂಕ:22.07.2016

2. ಎ.ಆರ್.ಎಲ್.ಓ-2 ಇವರ ಅ.ಸ.ಪತ್ರ ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ಬಿಜಿಎಂ/2153/2015/ ಎಆರ್‌ಎಲ್‌ಓ-2, ದಿನಾಂಕ: 06.08.2016.

****

**ಪ್ರಸ್ತಾವನೆ:**

ಎ.ಆರ್.ಎಲ್.ಓ-2, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರಲ್ಲಿ ಓದಲಾದ ಪತ್ರದೊಂದಿಗೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಶ್ರೀ ಸೋಮವ್ವ ಗಂಡ ಯಲ್ಲಪ್ಪ ತಳವಾರ್, ಇವರು ರೋಣ ತಾಲ್ಲೂಕಿನ ಅಸೂಟಿ ಗ್ರಾಮ ಪಂಚಾಯತಿಯಲ್ಲಿ ಬರುವ ಮಾಳವಾಡ್ ಗ್ರಾಮದ ತನ್ನ ಗಂಡ ಹೆಸರಿನಲ್ಲಿ 2004-05ನೇ ಸಾಲಿನಲ್ಲಿ ಆಶ್ರಯ ಮನೆ ಪಡೆದುಕೊಂಡಿದ್ದು, ಸದರಿಯವರು ತಮ್ಮ ತವರು ಮನೆಯಾದ ಬಾದಾಮಿ ತಾಲ್ಲೂಕಿನ ಹಾಲಿಗೇರಿ ಗ್ರಾಮದಲ್ಲಿ ಸೋಮವ್ವ ತಂದೆ ರಾಮಪ್ಪ ಯರಗಟ್ಟಿ ಅಂತ ಹೆಸರಿನಲ್ಲಿ ಆಶ್ರಯ ಯೋಜನೆಯಲ್ಲಿ ಮನೆ ಪಡೆದಿರುತ್ತಾರೆಂದು, ಒಬ್ಬ ಹೆಣ್ಣುಮಗಳು ಕಾನೂನು ಬಾಹಿರವಾಗಿ ಸರ್ಕಾರದಿಂದ ಎರಡು ಬಾರಿ ಆಶ್ರಯ ಯೋಜನೆಯಲ್ಲಿ ಫಲಾನುಭವಿಯಾಗಿದ್ದು, ಇದಕ್ಕೆ ಈ ಕೆಳಕಂಡ ಅಧಿಕಾರಿ/ನೌಕರರು ಕಾರಣಕರ್ತರಾಗಿರುತ್ತಾರೆಂದು ಆರೋಪಿಸಿ, ಬಾದಾಮಿ ತಾಲ್ಲೂಕಿನ ಹಾಲಿಗೇರಿ

ನಿವಾಸಿಯಾದ ಶ್ರೀ ಎಸ್.ಎಲ್.ದೇವರಮನಿ, ಇವರು ನೀಡಿದ್ದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 9 ರನ್ವಯ ತನಿಖೆ ಕೈಗೊಳ್ಳಲಾಗಿರುತ್ತದೆ ಎಂದು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಲ್ಲಿ ವರದಿ ಮಾಡಲಾಗಿರುತ್ತದೆ.

| ಕ್ರ.ಸಂ | ಅಧಿಕಾರಿಯ ಹೆಸರು ಮತ್ತು ಪದನಾಮ | ಎದುರುದಾರರ ಸಂಖ್ಯೆ: |
|---|---|---|
| 1. | ಶ್ರೀ ಎಸ್.ಪಿ.ಹಿರೇಮಠ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ನೀರಬೂದಿಹಾಳ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ. | 1 |
| 2. | ಶ್ರೀ ಎಲ್.ಹೆಚ್.ಪೂಜಾರ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ನೀರಬೂದಿಹಾಳ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ. | 2 |
| 3. | ಶ್ರೀ ಶಿವಾನಂದ ಹೂಗಾರ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಬಾದಾಮಿ, ಬಾಗಲಕೋಟೆ ಜಿಲ್ಲೆ. | 3 |
| 4. | ಶ್ರೀ ಗೌಸ್ ಮೋಹಿದ್ದೀನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅಸೂಟಿ ಗ್ರಾಮ ಪಂಚಾಯತಿ, ರೋಣ ತಾಲ್ಲೂಕು, ಗದಗ ಜಿಲ್ಲೆ. | 4 |

ದೂರುದಾರರಾದ ಶ್ರೀ ಎಸ್.ಎಲ್.ದೇವರಮನಿ, ಇವರು ನೀಡಿದ್ದ ದೂರಿನ ಬಗ್ಗೆ ಎದುರುದಾರರು 1-4 ಇವುಗಳಿಂದ ಪಡೆಯಲಾಗಿದ್ದ ಹೇಳಿಕೆಗಳನ್ನು, ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಕೆಳಕಂಡ ಅಂಶ ಕಂಡು ಬಂದಿರುತ್ತದೆ ಎಂದು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಲ್ಲಿ ವರದಿ ಮಾಡಲಾಗಿರುತ್ತದೆ.

i) **ಶ್ರೀಮತಿ ಸೋಮವ್ವ ಗಂಡ ಯಲ್ಲಪ್ಪ ತಳವಾರ್ ಇವರು ರೋಣ ತಾಲ್ಲೂಕಿನ ಅಸೂಟಿ ಗ್ರಾಮದಲ್ಲಿ 2003-04ನೇ ಸಾಲಿನಲ್ಲಿ ಆಶ್ರಯ ಯೋಜನೆಯಲ್ಲಿ ಫಲಾನುಭವಿಯಾಗಿ ಮನೆ ಪಡೆದುಕೊಂಡಿದ್ದಾಳೆಂದು ಅಲ್ಲಿ ಲಭ್ಯವಿದ್ದ ದಾಖಲೆಗಳ ಆಧಾರದ ಮೇಲೆ ಕಂಡು ಬರುತ್ತದೆ. ಇದೇ ಹೆಣ್ಣು ಮಗಳು ಸೋಮವ್ವ ತಂದೆ ರಾಮಪ್ಪ ಯರಗಟ್ಟಿ ಮಾಳವಾಡ್ ಗ್ರಾಮದ ನಿವಾಸಿ ಅಂತ 2013-14ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿಯಲ್ಲಿ**

ಫಲಾನುಭವಿಯಾಗಿ ಆಯ್ಕೆಯಾಗಿದ್ದು ಸಹ ದಾಖಲೆಗಳ ಆಧಾರದ ಮೇಲೆ ಕಂಡು ಬಂದಿರುತ್ತದೆ. ಆದರೆ ನಿಯಮಗಳ ಪ್ರಕಾರ ಒಬ್ಬ ವ್ಯಕ್ತಿ ಸರ್ಕಾರದಿಂದ ಯಾವುದೇ ಯೋಜನೆಯಡಿಯಲ್ಲಿ ಒಂದು ಬಾರಿ ಮಾತ್ರ ಫಲಾನುಭವಿಯಾಗಿರತಕ್ಕದ್ದು."

ii) ಎದುರುದಾರ ನಂ;1 ರಿಂದ 3 ರವರು ಶ್ರೀಮತಿ ಸೋಮವ್ವ ಇವರು ರೋಣ ತಾಲ್ಲೂಕಿನ ಅಸೂಟಿ ಗ್ರಾಮದಲ್ಲಿ ಫಲಾನುಭವಿಯಾದ ಬಗ್ಗೆ ಕೇಳಿದಾಗ ದಿನಾಂಕ: 19.12.2014 ರಂದು ಅಸೂಟಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸೇರಿ ಶ್ರೀಮತಿ ಸೋಮವ್ವ ಯಲ್ಲಪ್ಪ ತಳವಾರ್ ಎನ್ನುವವರು ತನ್ನ ಗ್ರಾಮದಲ್ಲಿ ಯಾರು ಇರುವುದಿಲ್ಲ. ಅಂತ ಸ್ಥಾನಿಕ ದೃಢೀಕರಣ ಪತ್ರ ನೀಡಿದ್ದಾರೆ. ಆದರೆ ದಿನಾಂಕ: 15.07.2015 ರಂದು ಎದುರುದಾರ ನಂ-4 ರವರು ಶ್ರೀಮತಿ ಸೋಮವ್ವ ಗಂಡ ಯಲ್ಲಪ್ಪ ತಳವಾರ್ ಊರ್ಫ ಅಡ್ನೂರು ಇವರಿಗೆ ಮಾಳವಾಡ್ ಗ್ರಾಮದಲ್ಲಿ 2003-04ರ ಸಾಲಿನಲ್ಲಿ ಆಶ್ರಯ ವಸತಿಯೋಜನೆಯಡಿ ವಸತಿ ಸೌಲಭ್ಯಕ್ಕೆ 20,000/-ರೂ.ಗಳ ಹಣ ನೀಡಲಾಗಿದೆ ಅಂತ ಈ ಕಾರ್ಯಾಲಯಕ್ಕೆ ತಿಳಿಸಿದ್ದಾರೆ.

iii) ಎದುರುದಾರರು ತಾವು ಮಾಡಿದ ತಪ್ಪನ್ನು ಒಬ್ಬರ ಮೇಲೆ ಇನ್ನೊಬ್ಬರು ಹಾಕುತ್ತಾ ಅನರ್ಹ ಫಲಾನುಭವಿಯನ್ನು ಆಯ್ಕೆ ಮಾಡಿ ಎರಡೂ ಗ್ರಾಮದಲ್ಲಿ ಸರ್ಕಾರದಿಂದ ಬೇರೆ ಬೇರೆ ಯೋಜನೆಯಲ್ಲಿ ವಸತಿ ಸೌಲಭ್ಯಕ್ಕಾಗಿ ಹಣ ಮಂಜೂರು ಮಾಡಿದ್ದಾರೆ. ಆದ್ದರಿಂದ 1 ರಿಂದ 4ನೇ ಎದುರುದಾರರು ಫಲಾನುಭವಿಯನ್ನು ಆಯ್ಕೆ ಮಾಡುವ ವಿಷಯದಲ್ಲಿ ಹಾಗೂ ಸರ್ಕಾರದ ಹಣವನ್ನು ಅರ್ಹರಿಗೆ ಪಾವತಿಸುವಲ್ಲಿ ಕರ್ತವ್ಯ ಲೋಪವೆಸಗಿದ್ದಾರೆ.

ಅಧಿಕಾರಿ/ನೌಕರರು ನೀಡಿರುವ ಲಿಖಿತ ರಕ್ಷಣಾ ಹೇಳಿಕೆಗಳು, ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ ಸಮಂಜಸವಾಗಿರುವುದಿಲ್ಲವೆಂದು, ಸದರಿಯವರುಗಳು ಸರ್ಕಾರಿ ನೌಕರರಾಗಿ ಸಂಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ, ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಸದರಿ 4 ಅಧಿಕಾರಿ/ನೌಕರರುಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಪ್ರಕರಣವನ್ನು ತಮಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ವಹಿಸುವಂತೆ, ಹಾಗೂ

ಎದುರುದಾರರು 2 ರವರಾದ ಶ್ರೀ ಎಲ್.ಹೆಚ್.ಪೂಜಾರ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ನೀರಬೂದಿಹಾಳ, ಬಾದಾಮಿ ತಾಲ್ಲೂಕು, ಇವರು ದಿನಾಂಕ: 31.07.2015 ರಂದು ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಿರುವುದರಿಂದ, ಇವರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಕೆ.ಸಿ.ಎಸ್.ಆರ್. ನಿಯಮ 214)2)(ಬಿ)(i) ರನ್ವಯ ಅನುಮತಿಯನ್ನು ನೀಡುವಂತೆ, ಮಾನ್ಯ ಉಪಲೋಕಾಯುಕ್ತರು-I, ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ರ ಕಲಂ 12(3) ರನ್ವಯ ಶಿಫಾರಸ್ಸು ಮಾಡಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು/ಅದರೊಂದಿಗೆ ಅಡಕವಾಗಿರು ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರರು 1-4 ಇವರು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ, ಮಾನ್ಯ ಉಪಲೋಕಾಯುಕ್ತರು-I, ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ, ಮಾಡಿರುವ ಶಿಫಾರಸ್ಸಿನಂತೆ, ಸದರಿ ಅಧಿಕಾರಿ/ನೌಕರರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ, ವಿವರವಾದ ಇಲಾಖಾ ವಿಚಾರಣೆಯನ್ನು ಜರುಗಿಸಲು, ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ, ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಲು, ಹಾಗೂ 2ನೇ ಎದುರುದಾರರಾದ, ಶ್ರೀ ಎಲ್.ಹೆಚ್.ಪೂಜಾರ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ನೀರಬೂದಿಹಾಳ, ಬಾದಾಮಿ ತಾಲ್ಲೂಕು, ಇವರು ದಿನಾಂಕ: 31.07.2015 ರಂದು ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಿರುವುದರಿಂದ, ಇವರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಕೆ.ಸಿ.ಎಸ್.ಆರ್. ನಿಯಮ 214(2)(ಬಿ)(i) ರನ್ವಯ ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 247 ಪಬವ 2016 ಬೆಂಗಳೂರು ದಿನಾಂಕ: 16-09-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, 2ನೇ ಎದುರುದಾರರಾದ ಶ್ರೀ ಎಲ್.ಹೆಚ್.ಪೂಜಾರ, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯತಿ ನೀರಬೂದಿಹಾಳ, ಬಾದಾಮಿ ತಾಲ್ಲೂಕು ಬಾಗಲಕೋಟೆ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಜರುಗಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ)(i) ರನ್ವಯ ಸರ್ಕಾರದ ಮಂಜೂರಾತಿಯನ್ನು ನೀಡಿ, ಈ ಕೆಳಕಂಡ 4 ಅಧಿಕಾರಿ/ನೌಕರರುಗಳ ವಿರುದ್ಧದ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ)

ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

| ಕ್ರ.ಸಂ | ಅಧಿಕಾರಿಯ ಹೆಸರು ಮತ್ತು ಪದನಾಮ | ಎದುರುದಾರರ ಸಂಖ್ಯೆ: |
|---|---|---|
| 1. | ಶ್ರೀ ಎಸ್.ಪಿ.ಹಿರೇಮಠ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ನೀರಬೂದಿಹಾಳ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ. | 1 |
| 2. | ಶ್ರೀ ಎಲ್.ಹೆಚ್.ಪೂಜಾರ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ನೀರಬೂದಿಹಾಳ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ. | 2 |
| 3. | ಶ್ರೀ ಶಿವಾನಂದ ಹೂಗಾರ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಬಾದಾಮಿ, ಬಾಗಲಕೋಟೆ ಜಿಲ್ಲೆ. | 3 |
| 4. | ಶ್ರೀ ಗೌಸ್ ಮೋಹಿದ್ದೀನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅಸೂಟಿ ಗ್ರಾಮ ಪಂಚಾಯತಿ, ರೋಣ ತಾಲ್ಲೂಕು, ಗದಗ ಜಿಲ್ಲೆ. | 4 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

16/9/2016

( ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಜಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬಾಗಲಕೋಟೆ/ಗದಗ
4) ಎ.ಆರ್.ಎಲ್.ಓ-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.
5) ಸಂಬಂಧಿಸಿದ ಅಧಿಕಾರಿಗಳಿಗೆ.(ಮು.ಕಾ.ನಿ.ಅ.ಜಿಪಂ. ಗದಗ/ಬಾಗಲಕೋಟೆ, ಇವರ ಮುಖಾಂತರ)

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.